ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಎನ್.ಪಿ.ಎಸ್. ಯೋಜನೆ ರದ್ದುಗೊಳಿಸುವ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಹಾಗೂ ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

791 (698+891) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; ಇದರಲ್ಲಿ ಎನ್.ಪಿ.ಎಸ್ ಪಿಂಚಣಿ ವ್ಯವಸ್ಥೆಗೆ ಒಳಪಟ್ಟ ನೌಕರರು ಎಷ್ಟು ;

(ಆ) ರಾಜ್ಯ ಸರ್ಕಾರಿ ನೌಕರರು ಎನ್.ಪಿ.ಎಸ್ ಯೋಜನೆಯನ್ನು ಕೈಬಿಟ್ಟು ಹಳೆ ಪಿಂಚಣಿ ಜಾರಿ ಮಾಡುವಂತೆ ನಡೆಸಿರುವ ಪ್ರತಿಭಟನೆಗಳು ಮತ್ತು ಸದರಿ ನೌಕರರ ಸಂಘಗಳು ಮಾಡಿರುವ ಮನವಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ವಹಿಸಿರುವ ಕ್ರಮಗಳೇನು ;

(ಇ) ರಾಜ್ಯ ಸರ್ಕಾರಿ ನೌಕರರಿಗೆ ಹಳೆ ಪಿಂಚಣಿ ವ್ಯವಸ್ಥೆ ಜಾರಿ ಮಾಡಿದ್ದಲ್ಲಿ ಸರ್ಕಾರಕ್ಕೆ ಆಗಬಹುದಾದ ಲಾಭ-ನಷ್ಟಗಳ ಬಗ್ಗೆ ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆಯೇ ; ಯಾವಾಗ ರಚಿಸಲಾಯಿತು; (ವಿವರ ನೀಡುವುದು)

(ಈ) ಈ ಸಮಿತಿಗೆ ಸರ್ಕಾರ ನಿಗದಿಪಡಿಸಿದ ಕಾಲಮಿತಿ ಎಷ್ಟು ; ಸದರಿ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ ; ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ; ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ;

(ಉ) ರಾಜ್ಯ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್ ಯೋಜನೆಯನ್ನು ಜಾರಿ ಮಾಡುವಂತೆ ಕೇಂದ್ರ ಸರ್ಕಾರವು ಕಡ್ಡಾಯಗೊಳಿಸಿದೆಯೇ; ಕಡ್ಡಾಯಗೊಳಿಸಿದ್ದಲ್ಲಿ, ಈ ಸಂಬಂಧ ಕೇಂದ್ರ ಸರ್ಕಾರವು ಹೊರಡಿಸಿರುವ ಆದೇಶಗಳ ದಾಖಲೆಯನ್ನು ನೀಡುವುದು ;

(ಊ) ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಎನ್.ಪಿ.ಎಸ್ ಯೋಜನೆಯನ್ನು ಹಿಂಪಡೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ? (ವಿವರ ನೀಡುವುದು)